ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 664(877)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರವಿಂದ ಕುಮಾರ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು

ವಿಷಯ : ಬೀದರ್ ಜಿಲ್ಲೆಯಲ್ಲಿ ಮರಳು ಅಭಾವದಿಂದ ಉಂಟಾಗಿರುವ ಸಮಸ್ಯೆ ಬಗ್ಗೆ

(ಅ) ಬೀದರ್ ಜಿಲ್ಲೆಯಲ್ಲಿ ಮರಳು ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಾರ್ವಜನಿಕರಿಗೆ ಅಗತ್ಯವಿರುವ ಮರಳು ಪೂರೈಕೆಗಾಗಿ ರೂಪಿಸಿರುವ ನೀತಿಗಳು/ನಿಯಮಗಳೇನು; ಅವು ಯಾವುವು;

(ಆ) ಬೀದರ್ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಮರಳು ಪೂರೈಸಲು ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಮರಳು ಪೂರೈಕೆಯ ಸ್ಥಳಗಳು ಯಾವುವು ಮತ್ತು ಸರ್ಕಾರ ಪ್ರತಿ ಟನ್ ಮರಳಿಗೆ ನಿಗದಿಪಡಿಸಿರುವ ದರ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಮರಳುಗಾರಿಕೆ (ಬ್ಲಾಕ್ ಸ್ಯಾಂಡ್) ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; ಎಷ್ಟು ಟನ್ ಮರಳು ಜಪ್ತಿ ಮಾಡಿಕೊಳ್ಳಲಾಗಿದೆ? (ವಿವರವಾದ ಮಾಹಿತಿ ನೀಡುವುದು)